# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 706 (642) |
| ಸದಸ್ಯರ ಹೆಸರು | : | ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.08.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಪ್ರೌಢ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟ ಕುಸಿದು ನಿರೀಕ್ಷಿತ ಫಲಿತಾಂಶ ಬರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದರೆ, ಈ ಬಗ್ಗೆ ಸರ್ಕಾರ ಏನು ಕ್ರಮ ಜರುಗಿಸುತ್ತದೆ ? | ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಶಾಲೆ ಒಂದು ಪರಿಣಾಮಕಾರಿ ವೇದಿಕೆ. ಮಗುವಿನ ಕಲಿಕೆ ಪರಿಣಾಮಕಾರಿ ಹಾಗೂ ಗುಣಮಟ್ಟದಿಂದ ಕೂಡಿದ್ದಾಗ ಮಾತ್ರ ಸರ್ವತೋಮುಖ ಅಭಿವೃದ್ಧಿ ಸಾಧ್ಯ. ಬದಲಾವಣೆಯ ಶಿಕ್ಷಣ ಭವಿಷ್ಯದ ನಿರ್ಮಾಣ- ಘೋಷವಾಕ್ಯದೊಂದಿಗೆ 2025-26 ನೇ ಸಾಲಿನಲ್ಲಿ ಪರಿಣಾಮಕಾರಿಯಾದ ಮತ್ತು ರಚನಾತ್ಮಕವಾದ ಚಟುವಟಿಕೆಗಳನ್ನು ಸಂಘಟಿಸುವುದರೊಂದಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅನೇಕ ಶೈಕ್ಷಣಿಕ ಚಟುವಟಿಕೆಗಳ ಮುಖಾಂತರ ಕಾರ್ಯಯೋಜನೆಗಳನ್ನು ರೂಪಿಸಿ ಅನುಷ್ಠಾನಕ್ಕೆ ತರಲಾಗುತ್ತಿದೆ.<br><br>**ಶಾಲಾ ವಿದ್ಯಾರ್ಥಿಗಳ ಕಲಿಕೆಯ ಗುಣಮಟ್ಟ ಸುಧಾರಣೆಗೆ ಸಂಬಂಧಿಸಿದಂತೆ:**<br><br>• ರಾಜ್ಯದಲ್ಲಿ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಒಟ್ಟಾರೆ 11929 ಹುದ್ದೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ ಬೋಧಕರ ವೃಂದದ ಸಹ ಶಿಕ್ಷಕರ ಖಾಲಿ ಹುದ್ದೆಗಳಿಗೆದುರಾಗಿ 9499 ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಗೌರವಧನ ಆಧಾರದ ಮೇಲೆ ಖಾಯಂ ಹುದ್ದೆ ಭರ್ತಿಯಾಗುವರೆಗೂ ಅಥವಾ ವರ್ಗಾವಣೆಯಿಂದ ಭರ್ತಿಯಾಗುವರೆಗೂ ಅಥವಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ನೇಮಕ ಮಾಡಿಕೊಳ್ಳಲಾಗಿದೆ.<br>• 2024-25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆಗೆ ಸುತ್ತೋಲೆ ಸಂಖ್ಯೆ: EP 272 SLB 2024 ದಿನಾಂಕ: 29/08/2024 ರಲ್ಲಿ 20 ಅಂಶಗಳ ಸೂಚನೆಗಳನ್ನು ನೀಡಿ ಅವುಗಳನ್ನು ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲು ತಿಳಿಸಲಾಗಿರುತ್ತದೆ. ಅದರಂತೆ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಸಭೆ ನಡೆಸಿರುತ್ತಾರೆ.<br>• 2024ರ ನವಂಬರ್ ಮಾಹೆಯಿಂದ ಉಪನಿರ್ದೇಶಕರು(ಆಡಳಿತ) ಹಾಗೂ ಉಪನಿರ್ದೇಶಕರು (ಅಭಿವೃದ್ಧಿ) ರವರೊಂದಿಗೆ SSLC ಗುಣಮಟ್ಟದ ಫಲಿತಾಂಶಕ್ಕೆ ಪ್ರಗತಿ ಪರಿಶೀಲನಾ ಸಭೆಗಳನ್ನು ಆಯೋಜಿಸಲಾಗಿರುತ್ತದೆ.<br><br>ಎಸ್.ಎಸ್.ಎಲ್.ಸಿ ಪರೀಕ್ಷೆ ಫಲಿತಾಂಶವನ್ನು ಸುಧಾರಣೆಗೊಳಿಸಲು ಕ್ರಮಗಳನ್ನು ಕೈಗೊಳ್ಳಲಾಗಿದ್ದರೂ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿನ ಒಟ್ಟಾರೆ ಫಲಿತಾಂಶ ಈ ಕೆಳಗಿನ ಕೋಷ್ಟಕದಲ್ಲಿ ನಮೂದಿಸಿರುವಂತೆ ಬಂದಿರುತ್ತದೆ. |

| ಶಾಲೆಯ ವಿಧ | ಶೇಕಡವಾರು ಫಲಿತಾಂಶ |
|---|---|
| ಸರ್ಕಾರಿ | 62.7% |
| ಖಾಸಗಿ ಅನುದಾನಿತ | 58.97% |

**2023-24ನೇ ಸಾಲಿನ ಹಾಗೂ 2024-25ನೇ ಸಾಲಿನ ಎಸ್.ಎಸ್ಎಲ್.ಸಿ ಪ್ರಥಮ ಪರೀಕ್ಷೆಗಳ ತುಲನಾತ್ಮಕ ತಖ್ತೆ:**

- 2023-2024 ನೇ ಸಾಲಿನಲ್ಲಿ ಪ್ರಪ್ರಥಮ ಬಾರಿಗೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿಗಳ ಮೂಲಕ ವೆಬ್ ಕ್ಯಾಸ್ಟಿಂಗ್ ಹೊಸ ಪದ್ಧತಿಯನ್ನು ಪರಿಚಯಿಸಲಾಗಿತ್ತು. ಪರೀಕ್ಷಾ ಕೊಠಡಿಗಳ ದೃಶ್ಯಾವಳಿಗಳನ್ನು ಮೇಲ್ವಿಚಾರಣೆ ಮಾಡಲು ಎಲ್ಲಾ ಜಿಲ್ಲೆಗಳಲ್ಲಿ ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿತ್ತು. ಈ ನಾವೀನ್ಯ ಕ್ರಮವು ವಿನೂತನವಾಗಿದ್ದು, ಪರೀಕ್ಷೆಯ ಸಮಗ್ರತೆಯನ್ನು ಪುನರ್ ಸ್ಥಾಪಿಸಲು ಸಹಾಯಕವಾಗಿದೆ. ಈ ಮೂಲಕ ಪರೀಕ್ಷಾ ಅಕ್ರಮಗಳನ್ನು ಆಶ್ರಯಿಸದೆ ಪರೀಕ್ಷೆಗಳನ್ನು ಬರೆಯುವ ಅಭ್ಯಾಸವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವಲ್ಲಿ ಸಫಲವಾಗಿದ್ದು, ಈ ಕ್ರಮವನ್ನು ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪೋಷಕರನ್ನೊಳಗೊಂಡಂತೆ ಎಲ್ಲಾ ಭಾಗೀದಾರರು ಸ್ವಾಗತಿಸಿದ್ದಾರೆ.
- ಆದರೆ, ಒಟ್ಟಾರೆ ಫಲಿತಾಂಶ ಕಳೆದ ವರ್ಷಕ್ಕಿಂತ [2022-23] ಶೇ. 30 ರಷ್ಟು ಕಡಿಮೆಯಾಗಿತ್ತು. ಮೊದಲ ಬಾರಿಗೆ ವೆಬ್ ಕ್ಯಾಸ್ಟಿಂಗ್ ವಿಧಾನವನ್ನು ಪರಿಚಯಿಸಿದ್ದರಿಂದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ 20% ಗ್ರೇಸ್ ಅಂಕಗಳನ್ನು ನೀಡಲು ಸರ್ಕಾರ ನಿರ್ಧರಿಸಿತ್ತು. ಹಾಗೂ ಮುಂಬರುವ ವರ್ಷದಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ನೂತನ ವ್ಯವಸ್ಥೆಗೆ ಉತ್ತಮವಾಗಿ ಹೊಂದಿಕೊಳ್ಳುವುದರಿಂದ ಕೃಪಾಂಕ ನೀಡುವ ಅವಶ್ಯಕತೆ ಇರುವುದಿಲ್ಲ ಎಂದು ನಿರ್ಧರಿಸಲಾಗಿದೆ.
- ಈ ಹಿನ್ನೆಲೆಯಲ್ಲಿ, ಒಂದು ಬಾರಿಯ ಕ್ರಮವಾಗಿ, 2024ರ ಎಲ್ಲಾ 3 ಎಸ್ಎಸ್ಎಲ್ಸಿ ಪರೀಕ್ಷೆಗಳಿಗೆ ಎಲ್ಲಾ ವಿಷಯಗಳಲ್ಲಿ ನೀಡುವ ಕೃಪಾಂಕಗಳನ್ನು ಆಕರ್ಷಿಸಲು ಪಡೆಯಬೇಕಾದ ಅರ್ಹ ಅಂಕಗಳನ್ನು ಶೇ. 35 ರಿಂದ ಶೇ. 25ಕ್ಕೆ ಇಳಿಸಲಾಗಿದೆ ಮತ್ತು ಕೃಪಾಂಕದ ಪ್ರಮಾಣವನ್ನು ಶೇ. 10 ರಿಂದ ಶೇ. 20ಕ್ಕೆ ಹೆಚ್ಚಿಸಲಾಗಿತ್ತು.
- ಈ ಕ್ರಮದ ನಂತರ ಒಟ್ಟಾರೆ ಫಲಿತಾಂಶವು ಈ ಕೆಳಗಿನ ಕೋಷ್ಟಕದಂತಿರುತ್ತದೆ.

**2023-24 ನೇ ಸಾಲಿನ ಪರೀಕ್ಷೆ-1 ರ ಫಲಿತಾಂಶ 20% ಗ್ರೇಸ್ ಅಂಕಗಳೊಂದಿಗೆ**

| 2024 SSLC EXAM 1 RESULT STATISTICS (CCERF, 20% GRACE PASSED) | | | |
|---|---|---|---|
| GOVT | AIDED | UN-AIDED | TOTAL |
| 72.58 % | 72.34 % | 86.57 % | 77.03 % |

2023-24 ನೇ ಸಾಲಿನಲ್ಲಿಯೂ ಕೇವಲ ಶೇಕಡ 10% ಕೃಪಾಂಕದಂತೆ ಫಲಿತಾಂಶ ನೀಡಿದ್ದಲ್ಲಿ ಈ ಕೆಳಗಿನಂತೆ ಇರುತ್ತಿತ್ತು. ಇದನ್ನು 2024-25ನೇ ಸಾಲಿನ ಫಲಿತಾಂಶಕ್ಕೆ ಹೋಲಿಸಿದಲ್ಲಿ ಈ ಕೆಳಗಿನ ಹೆಚ್ಚಳವನ್ನು ಕಾಣಬಹುದು.

**2023-24 ನೇ ಸಾಲಿನ ಪರೀಕ್ಷೆ-1 ರ ಫಲಿತಾಂಶ (10 % ಗ್ರೇಸ್ ಅಂಕಗಳಂತೆ)**

| 2024 SSLC EXAM 1 RESULT STATISTICS (CCERF, 10% GRACE PASSED) | | | | |
|---|---|---|---|---|
| **YEAR** | **GOVT** | **AIDED** | **UN-AIDED** | **TOTAL** |
| 2023-24 | 53.3 % | 52.67 % | 72.9 % | 59.45 % |

**2024-25 ನೇ ಸಾಲಿನ ಪರೀಕ್ಷೆ-1 ರ ಫಲಿತಾಂಶ (ಪ್ರತಿ ವರ್ಷ ನೀಡಲಾದ 10% ಗ್ರೇಸ್ ಅಂಕಗಳಂತೆ)**

| SSLC 2025 EXAM 1 SCHOOL MANAGEMENT TYPE WISE RESULT [REGULAR FRESHER] | | | | |
|---|---|---|---|---|
| **YEAR** | **GOVT** | **AIDED** | **UNAIDED** | **ALL** |
| 2024-25 | 62.7 % | 58.97 % | 75.59 % | 66.14 % |

**2023-24 (10% ಗ್ರೇಸ್) ಮತ್ತು 2024-25 ನೇ ಸಾಲಿನ (10% ಗ್ರೇಸ್) ಫಲಿತಾಂಶದಲ್ಲಿ ವ್ಯತ್ಯಾಸ**

| SSLC 2024 & 2025 EXAM 1 SCHOOL MANAGEMENT TYPE WISE RESULT DIFFERENCE [REGULAR FRESHER, 10% grace] | | | | |
|---|---|---|---|---|
| **YEAR** | **GOVT** | **AIDED** | **UN-AIDED** | **TOTAL** |
| 2023-24 | 53.30% | 52.67% | 72.90% | 59.45% |
| 2024-25 | 62.70% | 58.97% | 75.59% | 66.14% |
| **DIFFERENCE** | **9.4** | **6.3** | **2.69** | **6.69** |

ಈ ಮೇಲಿನಂತೆ 2023-24 ನೇ ಸಾಲಿನ ಪರೀಕ್ಷೆ-1 (10% ಗ್ರೇಸ್) ಗಿಂತ 2024-25 ನೇ ಸಾಲಿನ ಪರೀಕ್ಷೆ-1 (10% ಗ್ರೆಸ್) ಫಲಿತಾಂಶದಲ್ಲಿ ಒಟ್ಟಾರೆ 6.69 % ಹೆಚ್ಚಳ ಆಗಿರುವುದು ಕಂಡು ಬರುತ್ತಿದೆ.

**2025-26ನೇ ಸಾಲಿನಲ್ಲಿ SSLC ಫಲಿತಾಂಶ ಸುಧಾರಣೆಗೆ ಕೈಗೊಳ್ಳಲಾಗುವ ಕ್ರಮಗಳು:**

- ಇಪಿ 215 ಎಸ್ಎಲ್‌ಬಿ 2025 ದಿನಾಂಕ: 01.07.2025 ರಲ್ಲಿ 2025-26ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ವೃದ್ಧಿಗಾಗಿ ಅನುಸರಿಸಬೇಕಾದ ಕ್ರಮಗಳ ಕುರಿತು 29 ಅಂಶಗಳ

ಸೂಚನೆ ಜಾರಿಯಲ್ಲಿದ್ದು ಜಿಲ್ಲೆಗಳಲ್ಲಿ ಅನುಷ್ಠಾನವಾಗುತ್ತಿದೆ.

- ಪ್ರಸ್ತುತ 9 ನೇ ತರಗತಿಯಿಂದ 10 ನೇ ತರಗತಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಸೇತು ಬಂಧ ಕಾರ್ಯಕ್ರಮವನ್ನು ನಡೆಸಿ, ಆ ಮಕ್ಕಳ ಪ್ರವೇಶ ಕಲಿಕಾಂಶಗಳ ಸಾಧನೆಯನ್ನು ಪತ್ತೆ ಹಚ್ಚಿ, ವಿದ್ಯಾರ್ಥಿಗಳಲ್ಲಿ ಸಾಧನೆಯಾಗದ ಕಲಿಕಾಂಶಗಳನ್ನು ಕಲಿಸಲು ಪರಿಹಾರ ಬೋಧನೆ ಕೈಗೊಳ್ಳಲಾಗುವುದು. ಈ ಕುರಿತು ಡಿ.ಎಸ್.ಇ.ಆರ್.ಟಿ. ವತಿಯಿಂದ ಕ್ರಮವಹಿಸಲಾಗುವುದು.

- ಪ್ರಸ್ತುತ ವರ್ಷ ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ಸುತ್ತೋಲೆ ದಿನಾಂಕ: 16.7.2025 ರಂತೆ ಅಧ್ಯಾಯ ಆಧಾರಿತ ಮೌಲ್ಯಾಂಕನ (Lesson Based Assessment) ಕೈಗೊಳ್ಳಲಾಗುವುದು. ಇದರಿಂದ ಯಾವುದೇ ವಿದ್ಯಾರ್ಥಿಗಳು ಆಯಾ ಪಾಠದಲ್ಲಿನ ಕಲಿಕಾಂಶಗಳನ್ನು ಪಡೆದುಕೊಳ್ಳದೇ ಇದ್ದಲ್ಲಿ ಆ ಕಲಿಕಾಂಶಗಳನ್ನು ಅದೇ ಸಂದರ್ಭದಲ್ಲಿ ಕಲಿಯಲು ಶಿಕ್ಷಕರು ಪರಿಹಾರಾತ್ಮಕ ಕ್ರಮಗಳನ್ನು ಕೈಗೊಂಡು ಮುಂದೆ ಸಾಗಲು ತಿಳಿಸಲಾಗುವುದು
- **<u>ಜ್ಞಾನಸೇತು</u>**: 1 ರಿಂದ 12 ನೇ ತರಗತಿವರೆಗಿನ ಸರ್ಕಾರಿ ಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಕಲಿಕೆಗಾಗಿ 'ಜ್ಞಾನಸೇತು' ಕಾರ್ಯಕ್ರಮವನ್ನು 2025-26 ನೇ ಸಾಲಿನಲ್ಲಿ ಖಾನ್ ಅಕಾಡೆಮಿ ಸಹಯೋಗದೊಂದಿಗೆ ಅನುಷ್ಠಾನಿಸಲಾಗುತ್ತಿದೆ. ಗಣಿತ, ವಿಜ್ಞಾನ ಮತ್ತು ಇಂಗ್ಲೀಷ್ ವಿಷಯಗಳಿಗೆ ಸಂಬಂಧಿಸಿದ ಡಿಜಿಟಲ್ ಸಂಪನ್ಮೂಲಗಳನ್ನು 21726 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ, 4871 ಸರ್ಕಾರಿ ಪ್ರೌಢ ಶಾಲೆಗಳ ಹಾಗೂ 1229 ಸರ್ಕಾರಿ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಲಿದ್ದಾರೆ.
- ಶಿಕ್ಷಕರಿಗೆ ತಂತ್ರಜ್ಞಾನ ಬಳಕೆ ಸಂಬಂಧ Induction & TALP ತರಬೇತಿ ನೀಡಲಾಗಿದ್ದು, ಶಿಕ್ಷಕರು ಅಂತರ್ಜಾಲವನ್ನು ಇಂದೀರಿಸುವ ಜ್ಞಾನ ಹೊಂದಿರುತ್ತಾರೆ.
- **<u>ತಂತ್ರಜ್ಞಾನ ಬೆಂಬಲಿತ ಕಲಿಕಾ ಕಾರ್ಯಕ್ರಮ</u>** (TALP)ವನ್ನು ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ 2016-17ರಿಂದ ಅನುಷ್ಠಾನಗೊಳಿಸಲಾಗುತ್ತಿದ್ದು ಈ ಕಾರ್ಯಕ್ರಮದಡಿ 4687 ಸರ್ಕಾರಿ ಪ್ರೌಢಶಾಲೆಗಳಿಗೆ ಲ್ಯಾಪ್‌ಟಾಪ್ ಮತ್ತು 3463 ಸರ್ಕಾರಿ ಪ್ರೌಢಶಾಲೆಗಳಿಗೆ ಪ್ರೊಜೆಕ್ಟರ್ ಒದಗಿಸಲಾಗಿದೆ. 3069 ಸರ್ಕಾರಿ ಪ್ರೌಢಶಾಲೆಗಳಿಗೆ ಕಂಪ್ಯೂಟರ್ ಲ್ಯಾಬ್ ಒದಗಿಸಲಾಗಿದೆ. 2025-26 ನೇ ಸಾಲಿನಲ್ಲಿ 218 ಶಾಲೆಗಳಿಗೆ ಕಂಪ್ಯೂಟರ್‌ಗಳನ್ನು ಸ್ಥಾಪಿಸುವ ಪ್ರಕ್ರಿಯೆ ಚಾಲನೆಯಲ್ಲಿದ್ದು, ಸದರಿ ಉಪಕರಣಗಳನ್ನು ಬಳಸಿಕೊಂಡು ಇ-ಸಂಪನ್ಮೂಲಗಳನ್ನು ಸೃಜಿಸಿ ತರಗತಿಗಳ ಬೋಧನಾ ಕಲಿಕಾ ಪ್ರಕ್ರಿಯೆ ಉತ್ತಮಪಡಿಸಲಾಗುತ್ತಿದೆ.

**ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ Digital Skill ಬಳಕೆ ಹಾಗೂ ಕಂಪ್ಯೂಟರ್ ಆಧಾರಿತ ಶಿಕ್ಷಣದ ಅಭಿವೃದ್ಧಿಗೆ ಸಂಬಂಧಿಸಿದಂತೆ**

- ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ತರಬೇತಿಯನ್ನು ನೀಡುವ ಮೂಲಕ ಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡಲಾಗಿದೆ.
- ಟ್ಯಾಲ್ಪ್ ಯೋಜನೆಯಡಿ ತಂತ್ರಜ್ಞಾನ ಬಳಕೆಯ ಬಗ್ಗೆ 38632 ಶಿಕ್ಷಕರಿಗೆ ಇಂಡಕ್ಷನ್ ತರಬೇತಿಯನ್ನು ಹಾಗೂ 9644 ಶಿಕ್ಷಕರಿಗೆ ರಿಫ್ರೆಷರ್ ತರಬೇತಿಯನ್ನು ನೀಡಲಾಗಿದೆ.
- 2024-25ನೇ ಸಾಲಿನಲ್ಲಿ ಸ್ವಯಂ ಸೇವಾ ಸಂಸ್ಥೆ Ekstep ಸಹಕಾರದೊಂದಿಗೆ Artificial Intelligence ಬಳಸಿಕೊಂಡು ರಾಜ್ಯದ 2593 ಶಾಲಾ ಕಾಲೇಜುಗಳಲ್ಲಿ 4 ಮತ್ತು 12 ನೇ

| | | |
|---|---|---|
| | | ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ "ಕಲಿಕಾದೀಪ" ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುತ್ತಿದೆ.<br>• 2025-26 ನೇ ಸಾಲಿನಲ್ಲಿ 28 ಜಿಲ್ಲೆಗಳ ಶಿಕ್ಷಕರಿಗೆ ಮರುಸಿಂಚನ (6 ರಿಂದ 10ನೇ ತರಗತಿಗೆ) ತರಬೇತಿ, ರಾಜ್ಯದ ಎಲ್ಲಾ ಜಿಲ್ಲೆಯ 3 ರಿಂದ 5 ತರಗತಿಗೆ ಗಣಿತ ಬೋಧಿಸುವ ಶಿಕ್ಷಕರಿಗೆ ಗಣಿತ ಗಣಕ ತರಬೇತಿ, ಗಣಿತ ಕಲಿಕಾ ಆಂದೋಲನಾ ತರಬೇತಿ, ಆದಿವಾಸಿ ವಸತಿ ಶಾಲೆಯ ಶಿಕ್ಷಕರಿಗೆ ತರಬೇತಿ, ನಲಿಕಲಿ ತರಬೇತಿ, ಪ್ರೌಢ ಶಾಲಾ ಶಿಕ್ಷಕರಿಗೆ ಗಣಿತ ಮತ್ತು ವಿಜ್ಞಾನ ತರಬೇತಿಯನ್ನು ಐಐಎಸ್‌ಸಿ, ಚಳ್ಳಕೆರೆಯಲ್ಲಿ ನೀಡಲಾಗುವುದು. ಇವು ಶಿಕ್ಷಕರ ಮುಖಾಂತರ ವಿದ್ಯಾರ್ಥಿಗಳಿಗೆ ತಲುಪುತ್ತಿದೆ. ಇದು ಗುಣಮಟ್ಟದ ಶಿಕ್ಷಣ ಹೆಚ್ಚಳಕ್ಕೆ ಸಹಾಯ ಮಾಡುತ್ತಿದೆ |

ಸಂಖ್ಯೆ: ಇಪಿ 292 ಎಸ್‌ಎಲ್ ಬಿ 2025

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.